2-72/13

**ಕರ್ನಾಟಕ ವಿಧಾನ ಪರಿಷತ್‌ನ ಮಾನ್ಯ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ, ಇವರು ನಿಯಮ 72 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

***

**ಪ್ರಶ್ನೆ:** ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಕಳೆದ 10 ವರ್ಷಗಳಿಂದ ಪರಿಷ್ಕರಿಸದೇ ಇರುವುದರಿಂದ ಉಂಟಾದ ಗಂಭೀರ ಸಮಸ್ಯೆಯ ಬಗ್ಗೆ ಸದನದಲ್ಲಿ ಪ್ರಸ್ತಾಪಿಸಬಯಸುತ್ತೇನೆ.

**ಉತ್ತರ:**

ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಚಾಲ್ತಿಯಲ್ಲಿದ್ದ 2006 ಮತ್ತು 2008 ರ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿನ ಕೆಲವೊಂದು ಹುದ್ದೆಗಳನ್ನು ತಿದ್ದುಪಡಿ / ಸೇರ್ಪಡೆ ಮಾಡುವ ಸಂಬಂಧ ನಿರ್ದೇಶನಾಲಯದ ಪತ್ರ ಸಂಖ್ಯೆ: ಡಿಟಿಇ/47/ಇಎಸ್‌ಟಿ (1)ಎ/2007, ದಿನಾಂಕ: 15.03.2010 ರಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಕೆಯಾಗಿರುತ್ತದೆ. ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರದ ಪತ್ರ ಸಂಖ್ಯೆ:ಇಡಿ 170 ಡಿಟಿಇ 2009, ದಿನಾಂಕ: 11.06.2010ರಲ್ಲಿ ಎಐಸಿಟಿಇಯ ಪರಿಷ್ಕೃತ ಮಾರ್ಗಸೂಚಿಗಳನ್ವಯ ಪರಿಶೀಲಿಸಿ ಪರಿಷ್ಕೃತ ಪ್ರಸ್ತಾವನೆಯನ್ನು ಸಲ್ಲಿಸುವಂತೆ ನಿರ್ದೇಶಿಸಲಾಗಿರುತ್ತದೆ. ಅದರಂತೆ, ನಿರ್ದೇಶಕರು, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ ಇವರ ಪತ್ರ ಸಂಖ್ಯೆ: ಡಿಟಿಇ/47/ಇಎಸ್‌ಟಿ(1)ಎ/2008, ದಿನಾಂಕ: 12.08.2010 ಮತ್ತು 11.10.2010 ರಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ 2006 ಮತ್ತು 2008ರ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ಪರಿಷ್ಕರಣೆ ಮಾಡುವ ಕುರಿತು ಕರಡು ನಿಯಮಾವಳಿಯ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಈ ಕುರಿತು ವೃಂದ ಮತ್ತು ನೇಮಕಾತಿ ನಿಯಮಾವಳಿಗಳಿಗೆ ತಿದ್ದುಪಡಿ ತರುವ ಸಲುವಾಗಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ, ಸಂಸದೀಯ ವ್ಯವಹಾರಗಳ ಇಲಾಖೆ ಮತ್ತು ಆರ್ಥಿಕ ಇಲಾಖೆಯ ಅಧಿಕಾರಿಗಳನ್ನೊಳಗೊಂಡ ವೃಂದ ಪರಿಶೀಲನಾ ಉಪಸಮಿತಿಯ ಹಲವಾರು ಸಭೆಗಳನ್ನು ನಡೆಸಿದ್ದು, ಸದರಿ ಸಮಿತಿಯು ಕೆಲವೊಂದು ಬದಲಾವಣೆ/ ಮಾರ್ಪಾಡುಗಳನ್ನು ಮಾಡಲು ಸೂಚಿಸಿದ್ದು, ಸದರಿ ಸೂಚನೆಗಳನ್ನು ಕರಡು ನಿಯಮಾವಳಿಯ ಪ್ರಸ್ತಾವನೆಯಲ್ಲಿ ಅಳವಡಿಸಿಕೊಳ್ಳಲಾಗಿರುತ್ತದೆ.

ಅಲ್ಲದೆ 2012 ಮತ್ತು 2016 ರಲ್ಲಿ ಎಐಸಿಟಿಇಯು ಪರಿಷ್ಕೃತ ಮಾರ್ಗಸೂಚಿಗಳನ್ನು ಹೊರಡಿಸಿದ್ದು, ಸದರಿ ಪರಿಷ್ಕೃತ ಮಾರ್ಗಸೂಚಿಗಳನ್ನು ತಾಂತ್ರಿಕ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಸೂಕ್ತವಾಗಿ ಅಳವಡಿಸಿಕೊಳ್ಳಬೇಕಾದ ಅಗತ್ಯ ಕಂಡುಬಂದ ಹಿನ್ನೆಲೆಯಲ್ಲಿ, ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿನ ಹಿರಿಯ ಅಧಿಕಾರಿಗಳನ್ನೊಳಗೊಂಡ ಸಮಿತಿಯನ್ನು ರಚಿಸಲಾಗಿ, ಸದರಿ ಸಮಿತಿಯು ಪರಿಶೀಲಿಸಿ, ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ಸಮಗ್ರ ಪರಿಷ್ಕರಣೆ/ತಿದ್ದುಪಡಿ ತರುವ ಸಂಬಂಧ ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ ಇವರು ದಿನಾಂಕ: 24-06-2017ರಂದು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯು ಕೆಲವೊಂದು ಅವಲೋಕನೆಗಳನ್ನು ಮಾಡಿದ್ದು, ಸದರಿ ಅವಲೋಕನೆಗಳನ್ನು ಅಳವಡಿಸಿಕೊಂಡು ಪರಿಷ್ಕರಿಸಿದ ವೃಂದ ಮತ್ತು ನೇಮಕಾತಿ ನಿಯಮಾವಳಿಗಳನ್ನು ಸಲ್ಲಿಸುವಂತೆ ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ ಇವರಿಗೆ ದಿನಾಂಕ: 23-01-2018ರ ಪತ್ರದಲ್ಲಿ ಸೂಚಿಸಲಾಗಿರುತ್ತದೆ. ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯು ಅವಲೋಕಿಸಿರುವಂತೆ ಕರಡು ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅಳವಡಿಸಿಕೊಂಡು ಪರಿಷ್ಕರಿಸಿದ ವೃಂದ

ಮತ್ತು ನೇಮಕಾತಿ ನಿಯಮಾವಳಿಗಳನ್ನು ಮತ್ತೊಮ್ಮೆ ಸಮಗ್ರವಾಗಿ ಪರಿಶೀಲಿಸಿ, ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ ಇವರು ದಿನಾಂಕ:20-03-2018ರ ಪತ್ರದಲ್ಲಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ತಾಂತ್ರಿಕ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸುವ ಸಂಬಂಧ ಪ್ರಸ್ತುತ ಜಾರಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿರುವ ಕೆಲವು ಹುದ್ದೆಗಳನ್ನು ರದ್ದುಗೊಳಿಸಿ, ಹೊಸ ಹುದ್ದೆಗಳನ್ನು ಸೃಜಿಸುವ ಮತ್ತು ಕೆಲವು ಹುದ್ದೆಗಳ ಪದನಾಮಗಳನ್ನು ಮರು ಪದನಾಮಗೊಳಿಸುವ ಬಗ್ಗೆ ಆರ್ಥಿಕ ಇಲಾಖೆಯು ನೀಡಿರುವ ಸಹಮತಿಯಂತೆ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಸೂಕ್ತವಾಗಿ ಅಳವಡಿಸಿಕೊಳ್ಳುವ ಸಂಬಂಧ ಸರ್ಕಾರದ ಆದೇಶ ಸಂಖ್ಯೆ: ಇಡಿ 35 ಡಿಟಿಇ 2018, ದಿನಾಂಕ:02/11/2019 ಹೊರಡಿಸಲಾಗಿರುತ್ತದೆ.

ಸದರಿ ಆದೇಶದಂತೆ, ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ ಇವರು ವೃಂದ ಮತ್ತು ನೇಮಕಾತಿ ನಿಯಮಗಳ ಕರಡು ಪ್ರಸ್ತಾವನೆಯನ್ನು ದಿನಾಂಕ: 12.12.2019 ರಂದು ಸಲ್ಲಿಸಿರುತ್ತಾರೆ. ಸದರಿ ಕರಡು ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಶೀಲಿಸಿ, ವೃಂದ ಮತ್ತು ನೇಮಕಾತಿ ನಿಯಮಗಳಿಗೆ ಸಮಗ್ರ ತಿದ್ದುಪಡಿ ಮಾಡುವ ಪ್ರಕ್ರಿಯೆ ಚಾಲ್ತಿಯಲ್ಲಿದ್ದು ಅಭಿಪ್ರಾಯ ಕೋರಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣ ಇಲಾಖೆ (ಸೇವಾ ನಿಯಮಗಳು) ಸಂಸದೀಯ ವ್ಯವಹಾರಗಳ ಇಲಾಖೆ ಮತ್ತು ಆರ್ಥಿಕ ಇಲಾಖೆಯ ಅಭಿಪ್ರಾಯಕ್ಕಾಗಿ ಸಲ್ಲಿಸಲಾಗಿರುತ್ತದೆ.

ಮುಂದುವರೆದು, ದಿನಾಂಕ: 12.02.2020 ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ವೃಂದ ಪರಿಶೀಲನಾ ಉಪ ಸಮಿತಿಯ ಸಭೆಯನ್ನು ನಡೆಸಲಾಗಿದ್ದು, ಸದಸ್ಯ ಇಲಾಖೆಗಳಾದ ಸಿಬ್ಬಂದಿ ಮತ್ತು ಆಡಳಿತ ಸುಧಾರಣ ಇಲಾಖೆ, ಸಂಸದೀಯ ವ್ಯವಹಾರಗಳ ಇಲಾಖೆ ಮತ್ತು ಆರ್ಥಿಕ ಇಲಾಖೆಯ ಪ್ರತಿನಿಧಿಗಳೊಂದಿಗೆ ವೃಂದ ಮತ್ತು ನೇಮಕಾತಿ ನಿಯಮಗಳ ಕರಡು ಪ್ರಸ್ತಾವನೆಯನ್ನು ಪರಿಷ್ಕರಿಸುವ ಸಂಬಂಧ ಪರಾಮರ್ಶಿಸಲಾಗಿರುತ್ತದೆ. ವೃಂದ ಪರಿಶೀಲನಾ ಉಪ ಸಮಿತಿಯ ಸದಸ್ಯ ಇಲಾಖೆಗಳ ಅಭಿಪ್ರಾಯ/ಸಹಮತಿ ದೊರೆತ ನಂತರ, ತುರ್ತಾಗಿ ತಾಂತ್ರಿಕ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳ ಕರಡು ಪ್ರಸ್ತಾವನೆಯನ್ನು ಅಂತಿಮಗೊಳಿಸಲು ಕ್ರಮವಹಿಸಲಾಗುವುದು.

ಇಡಿ 26 ಟಿಪಿಇ 2020

(ಡಾ॥ ಅಶ್ವತ್ಥನಾರಾಯಣ್.ಸಿ.ಎನ್)
ಉಪ ಮುಖ್ಯಮಂತ್ರಿಗಳು
(ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ,
ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ
ಹಾಗೂ ಕೌಶಲ್ಯಾಭಿವೃದ್ಧಿ ಮತ್ತು ತರಬೇತಿ ಇಲಾಖೆ)